



ಅರುಣ ಪಿ. ಭಟ್ಟ

# ವಾರಭವಿಷ್ಯ: 26.10.2023ರಿಂದ 01.11.2023ರವರೆಗೆ




ಕುಟುಂಬ ಸದಸ್ಯರ ಜೊತೆಗೆ ಮಾತನಾಡುವಾಗ ಎಚ್ಚರಿಕೆಯಿಂದ ಇರಬೇಕು. ಸಿಟ್ಟಿನ ಕೈಗೆ ಬುದ್ಧಿ ಕೊಟ್ಟರೆ ನಂತರ ಪರಿತಪಿಸುವಂತಾಗುತ್ತದೆ. ಸಾಮಾಜಿಕ ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಹೊಸ ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರಿಗೆ ನಿರೀಕ್ಷಿತ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ವಾರಾಂತ್ಯಕ್ಕೆ ಹಣಕಾಸು ಸ್ಥಿತಿ ಇನ್ನಷ್ಟು ಉತ್ತಮವಾಗಲಿದೆ. ಶುಭದಿನ 27. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---

ಆಸ್ತಿ ಖರೀದಿ ವ್ಯವಹಾರ ಮಾಡುವವರಿಗೆ ಈ ವಾರ ಸೂಕ್ತ. ಕೌಟುಂಬಿಕ ಜೀವನ ಶಾಂತಯುತವಾಗಿ ಇರುತ್ತದೆ. ಕಾನೂನು ವಿಚಾರಗಳಲ್ಲಿ ಅದೃಷ್ಟ ನಿಮ್ಮ ಕಡೆಗೆ ಇರುತ್ತದೆ. ಆರೋಗ್ಯದಲ್ಲಿನ ಏರುಪೇರು ಸ್ವಲ್ಪ ಮಟ್ಟಿಗೆ ಚಿಂತೆಗೆ ಕಾರಣವಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ಸೋದರ ಸೋದರಿಯರ ಜತೆಗೆ ಭಿನ್ನಾಭಿಪ್ರಾಯ ತಲೆದೋರಬಹುದು. ಶುಭದಿನ 28. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




---




ವಾರದ ಆರಂಭದಲ್ಲಿ ಶುಭ ವಾರ್ತೆ ಕೇಳುವ ಯೋಗ ಇದೆ. ಆರೋಗ್ಯ ಚೆನ್ನಾಗಿರುತ್ತದೆ. ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ಅನಾರೋಗ್ಯ ಸಮಸ್ಯೆಗಳು ನಿವಾರಣೆ ಆಗುತ್ತವೆ. ದೈನಂದಿನ ವ್ಯವಹಾರಗಳಲ್ಲಿ ಶಿಸ್ತು ರೂಢಿ ಮಾಡಿಕೊಳ್ಳಲಿದ್ದೀರಿ. ಆಸ್ತಿ ಮಾರಾಟದಿಂದ ಲಾಭವಾಗಲಿದೆ. ವಾರದ ಮಧ್ಯಭಾಗದಲ್ಲಿ ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಶುಭದಿನ 29. ವಿಷ್ಣು ಸಹಸ್ರನಾಮ ಪಠಿಸಿರಿ.

---

ಸ್ಪರ್ಧೆಗಳಲ್ಲಿ ಭಾಗವಹಿಸುವವರಿಗೆ ಯಶಸ್ಸು ಪಡೆಯುವ ಸಾಧ್ಯತೆ ಹೆಚ್ಚಿದೆ. ನೀವು ಅದಕ್ಕಾಗಿ ನಡೆಸಿದ ತಯಾರಿಗೆ ಮೆಚ್ಚುಗೆಯ ಮಾತುಗಳನ್ನು ಕೇಳುತ್ತೀರಿ. ವಾರದ ಆರಂಭದಲ್ಲಿ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ನೀಡಬೇಕು. ಆದರೆ ಕ್ರಮೇಣ ಆರೋಗ್ಯ ಸುಧಾರಿಸುತ್ತಾ ಬರುತ್ತದೆ. ಸಂಗಾತಿ ಮಕ್ಕಳ ಮೇಲೆ ಹೆಚ್ಚಿನ ಗಮನ ವಹಿಸಬೇಕಾಗುತ್ತದೆ. ಶುಭದಿನ 30. ಆಂಜನೇಯ ಸ್ತೋತ್ರ ಪಠಿಸಿರಿ.




---




ನಿಮ್ಮ ಹಣಕಾಸು ಸ್ಥಿತಿ ಉತ್ತಮ ಮಾಡಿಕೊಳ್ಳಲು ಹೊಸ ಅವಕಾಶಗಳು ದೊರೆಯಲಿವೆ. ಉದ್ಯೋಗಸ್ಥರಿಗೆ ಪರ್ಯಾಯ ಅವಕಾಶಗಳು ದೊರೆಯಲಿವೆ. ಪ್ರೀತಿಪಾತ್ರರ ಜೊತೆ ಪ್ರವಾಸ ಮತ್ತು ಶಾಪಿಂಗ್ ಮಾಡಲಿದ್ದೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಮೇಲಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ಶುಭದಿನ 01. ಸೌಂದರ್ಯ ಲಹರಿ ಪಠಿಸಿರಿ.

---

ವೃತ್ತಿಪರರು, ವ್ಯಾಪಾರಸ್ಥರಿಗೆ ಉತ್ತಮ ಪ್ರಗತಿ ಇದೆ. ಜೊತೆಗಿರುವವರು ಕೆಲಸದ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡುತ್ತಾರೆ. ಉದ್ಯೋಗ ಬದಲಾವಣೆಗೆ ಯತ್ನಿಸುತ್ತಿರುವವರು ಅದಕ್ಕಾಗಿ ಇನ್ನೂ ಹೆಚ್ಚಿನ ಶ್ರಮ ಹಾಕಬೇಕು. ವಾರದ ಮಧ್ಯ ಭಾಗದಲ್ಲಿ ಹಣಕಾಸಿನ ಅನುಕೂಲ ಒದಗಿಬರಲಿದೆ. ಪ್ರೇಮಿಗಳು ಸುಮಧುರವಾದ ಸಮಯವನ್ನು ಕಳೆಯಲಿದ್ದೀರಿ. ಶುಭದಿನ 28. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




---




ನಿಮ್ಮ ಶ್ರಮವೇ ಗುರಿಯನ್ನು ನಿರ್ಧಾರ ಮಾಡುತ್ತದೆ. ಮೇಲಧಿಕಾರಿಗಳ ಜೊತೆಗೆ ಉತ್ತಮ ಬಾಂಧವ್ಯ ಏರ್ಪಡುತ್ತದೆ. ವಾರದ ಮಧ್ಯದಲ್ಲಿ ಆರೋಗ್ಯ ಉತ್ತಮವಾಗಿರುತ್ತದೆ. ಮನೆಗೆ ಅಗತ್ಯ ಇರುವ ಸಾಮಗ್ರಿಗಳನ್ನು ಖರೀದಿಸಲು ನಿರ್ಧರಿಸುತ್ತೀರಿ. ಇದಕ್ಕಾಗಿ ಸಾಲ ಮಾಡುವ ಸಾಧ್ಯತೆಗಳಿವೆ. ಆಹಾರ ನೀರು ಸೇವನೆ ಮಾಡುವಾಗ ಎಚ್ಚರಿಕೆಯಿಂದ ಇರಬೇಕು. ಶುಭದಿನ 27. ಹನುಮಾನ್ ಚಾಲಿಸ್ ಪಠಿಸಿರಿ

---

ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗುತ್ತದೆ. ಇದರಿಂದ ಸಂಬಂಧ ಸುಧಾರಣೆ, ವೃತ್ತಿಯ ಏಳ್ಗೆಗೆ ಅವಕಾಶ ದೊರೆಯುತ್ತದೆ. ಸರ್ಕಾರಿ ಸೇವೆಯಲ್ಲಿ ಇರುವವರಿಗೆ ನಾನಾ ರೀತಿಯಲ್ಲಿ ಅನುಕೂಲಗಳಿವೆ. ಸಾಮಾಜಿಕ ಕೆಲಸ ಕಾರ್ಯಗಳಲ್ಲಿ ತೊಡಗಿಕೊಳ್ಳುವುದರಿಂದ ಸಮಾಜದಲ್ಲಿ ಮನ್ನಣೆ ದೊರೆಯಲಿದೆ. ಹೊಸ ಉತ್ಸಾಹ ನಿಮ್ಮಲ್ಲಿ ಕಾಣಿಸಿಕೊಳ್ಳಲಿದೆ. ಶುಭದಿನ 30. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




---




ವಾರದ ಆರಂಭದಲ್ಲಿ ಅತ್ಯುತ್ತಮವಾದ ಸಮಯ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ಹಳೆ ಕಾಯಿಲೆಗಳು ಇದ್ದಲ್ಲಿ ವಾಸಿಯಾಗುತ್ತವೆ. ಈ ಮೂಲಕ ಶಿಸ್ತುಬದ್ಧ ಜೀವನಕ್ಕೆ ಒಗ್ಗಿಕೊಳ್ಳುತ್ತೀರಿ. ಉದ್ಯೋಗ ಬದಲಾವಣೆ ಬಯಸಿದಲ್ಲಿ ವಾರದ ಆರಂಭದಲ್ಲೇ ಶುಭ ವಾರ್ತೆ ದೊರೆಯಲಿವೆ. ನಿಮ್ಮ ಶಿಸ್ತು ಹಾಗೂ ಜೀವನ ಶೈಲಿಗೆ ಬದ್ಧರಾಗಿರಿ. ಶುಭದಿನ 26. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---

ವಾರದ ಆರಂಭದಲ್ಲಿ ವೃತ್ತಿಪರರಿಗೆ ಅವಕಾಶಗಳು ದೊರೆಯುತ್ತವೆ. ದೊಡ್ಡ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಆಸೆ ಪೂರೈಸುತ್ತದೆ. ಅಲರ್ಜಿ ಸಮಸ್ಯೆ ಇರುವವರು ಬಹಳ ಎಚ್ಚರಿಕೆಯಿಂದ ಇರಬೇಕು. ಸಂಗಾತಿ ಜೊತೆಗೆ ಸಂತಸದ ಸಮಯ ಕಳೆಯಲಿದ್ದೀರಿ. ಸಾಮಾಜಿಕ ಚಟುವಟಿಕೆಗಳ ಮಧ್ಯೆ ಗೊಂದಲ ಏರ್ಪಡಲಿದೆ. ಹಣಕಾಸು ನಷ್ಟ ಕಾಣುವ ಸನ್ನಿವೇಶ ಇದೆ. ಶುಭದಿನ 27. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.




---




ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ಅವರಿಂದ ನೀವು ಹೆಮ್ಮೆ ಪಡುತ್ತೀರಿ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ಅದಕ್ಕೆ ತಕ್ಕಂತೆ ನಿಮ್ಮ ಬಜೆಟನ್ನು ಯೋಜನೆ ರೂಪಿಸಿಕೊಳ್ಳಬಹುದು. ವೈಯಕ್ತಿಕ ಸಂಬಂಧವು ಸೌಹಾರ್ದಯುತವಾಗಿ ಇರುತ್ತದೆ. ಶುಭದಿನ 27. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.

---

ವೃತ್ತಿಪರ ಬದುಕಿನಲ್ಲಿ ಮಹತ್ತರ ಪ್ರಗತಿ ಕಾಣುವ ಯೋಗ ಇದೆ. ಸಂದರ್ಶನಗಳಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶುಭದಿನ 30. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.

